**All India Radio: Bangalore**
**Regional Bulletin In Kannada**
**20.04.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದರೆ, ನಾಳೆಯೇ ಮಹದಾಯಿ ಯೋಜನೆ ಜಾರಿ: ಮುಖ್ಯಮಂತ್ರಿ ಸಿದ್ದರಾಮಯ್ಯ
2. ವಿಜಯಪುರದ ೨ ಸಾವಿರ ಎಕರೆ ಪ್ರದೇಶದಲ್ಲಿ ಮಾನವ ನಿರ್ಮಿತ ಅರಣ್ಯ ಬೆಳೆಸಲು ನಿರ್ಧಾರ - ಸಚಿವ ಎಂ.ಬಿ.ಪಾಟೀಲ್
3. ಸಾಮಾಜಿಕ, ಆರ್ಥಿಕ ಗಣತಿ ವರದಿ ಹೆಸರಿನಲ್ಲಿ ೧೬೯ ಕೋಟಿ ರೂಪಾಯಿ ದುರುಪಯೋಗ - ಆರ್.ಅಶೋಕ ಆರೋಪ
4. ಮುಂದಿನ ಐದು ದಿನಗಳಲ್ಲಿ ರಾಜ್ಯದ ಹಲವೆಡೆ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ\
5. ಐಪಿಎಲ್ ಟಿ-೨೦ ಟೂರ್ನಿ; ಪಂಜಾಬ್ ಕಿಂಗ್ಸ್ ವಿರುದ್ಧ ೧೫೮ ರನ್ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು

<><><><>

ರೈತರು, ಶಿಕ್ಷಕರು, ಸೈನಿಕರು ದೇಶದ ರಕ್ಷಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕೃಷಿ ಇಲಾಖೆ ಸಹಾಯಧನದಡಿಯಲ್ಲಿ ಸುಮಾರು ೪೦೦ ಕೋಟಿ ವೆಚ್ಚದ ಕೃಷಿ ಯಂತ್ರ ಮತ್ತು ಸಲಕರಣೆಗಳನ್ನು ರೈತರಿಗೆ ವಿತರಿಸಿ ಮಾತನಾಡಿದ ಅವರು, ಕೃಷಿಕರಿಗೆ ಶೇಕಡ ೪೦ ರಷ್ಟು, ಪರಿಶಿಷ್ಠ ಸಮಾಜದ ಕೃಷಿಕರಿಗೆ ಶೇಕಡ ೫೦ ರಷ್ಟು ರಿಯಾಯ್ತಿಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ವಿತರಣೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕೃಷಿ ಕಾರ್ಮಿಕರ ಕೊರತೆಯಿಂದಾಗಿ ಕೃಷಿ ಯಂತ್ರಗಳ ಮೇಲಿನ ಅವಲಂಬನೆ ಹೆಚ್ಚಾಗಿದ್ದು ರಿಯಾಯ್ತಿ ಬೆಲೆಯಲ್ಲಿ ಕೃಷಿಯಂತ್ರಗಳ ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ. ಕಳೆದ ವರ್ಷ ೨೫ ಸಾವಿರಕ್ಕೂ ಹೆಚ್ಚು ಕೃಷಿ ಹೊಂಡ ಮಾಡಿಸಲಾಗಿದ್ದು ಇದು ಉಪಯುಕ್ತ ಯೋಜನೆಯಾಗಿದೆ ಎಂದು ತಜ್ಞರು ವರದಿ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ೨೯ ಸೆಕೆಂಡ್**

ಮಹದಾಯಿ, ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಒಪ್ಪಿಗೆ ಕೊಡುತ್ತಿಲ್ಲ. ಕೇಂದ್ರ ಸರ್ಕಾರ ಒಪ್ಪಿಗೆ ಕೊಟ್ಟರೆ ತಕ್ಷಣ ಈ ಎಲ್ಲಾ ನೀರಾವರಿ ಯೋಜನೆಗಳನ್ನು ಆರಂಭಿಸಲು ಸರ್ಕಾರ ಸಿದ್ಧವಿದೆ ಎಂದು ಘೋಷಿಸಿದ್ದಾರೆ.

<><><>

ವಿಜಯಪುರ ಜಿಲ್ಲೆಯ ಬಾಬಾನಗರ ಗ್ರಾಮದ ಬಳಿ ೨ ಸಾವಿರ ಎಕರೆ ಪ್ರದೇಶದಲ್ಲಿ ಹನಿ ನೀರಾವರಿ ಬಳಸಿ ಮಾನವ ನಿರ್ಮಿತ ಬೃಹತ್ ಅರಣ್ಯ ಬೆಳೆಸುವ ಮೂಲಕ ಸಿದ್ಧೇಶ್ವರ ಶ್ರೀಗಳಿಗೆ ಗೌರವ ಸಲ್ಲಿಸಲಾಗುವುದು ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ತಿಳಿಸಿದ್ದಾರೆ. ತಿಕೋಟಾ ತಾಲೂಕಿನ ಬಾಬಾನಗರ ಗ್ರಾಮದಲ್ಲಿ ಯಲ್ಲಮ್ಮನ ಹಳ್ಳಕ್ಕೆ ಹೊಸ ಜಿನುಗು ಕೆರೆ ನಿರ್ಮಾಣ, ಪೂಜಾರಿ ವಸ್ತಿ ಬಳಿ ೨ ಕೋಟಿ ರೂಪಾಯಿ ವೆಚ್ಚದಲ್ಲಿ ಜಿನುಗು ಕೆರೆ ನಿರ್ಮಾಣಕ್ಕೆ ಭೂಮಿ ಪೂಜೆ, ಸೇರಿದಂತೆ ಹಲವು ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ರಾಜ್ಯ ಮತ್ತು ದೇಶದ ಸರಾಸರಿಗೆ ಅನುಗುಣವಾಗಿ ವಿಜಯಪುರ ಜಿಲ್ಲೆಯಲ್ಲಿಯೂ ಅರಣ್ಯ ಬೆಳೆಸಲು ಎಲ್ಲರೂ ಕೈಜೋಡಿಸುವಂತೆ ಮನವಿ ಮಾಡಿದ್ದಾರೆ. ಬೇಸಿಗೆಯಲ್ಲಿ ಈ ಭಾಗದಲ್ಲಿ ಉಂಟಾಗುವ ನೀರಿನ ಕೊರತೆ ನೀಗಿಸಲು ಲಭ್ಯವಿರುವ ನೀರನ್ನು ಸಂಗ್ರಹಿಸಲು ಸರಕಾರಿ ಜಮೀನಿನಲ್ಲಿ ಎರಡು ಕಡೆ ಒಂದು ಟಿಎಂಸಿ ಸಾಮರ್ಥ್ಯದ ಸ್ಟೋರೇಜ್ ಟ್ಯಾಂಕ್ ನಿರ್ಮಿಸುವ ಯೋಜನೆ ಇದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ತಮ್ಮ ಜಮೀನು ಮಾರಾಟಮಾಡದಂತೆ ಸಲಹೆ ನೀಡಿದ್ದಾರೆ.

<><><>

ಸಚಿವ ಸಂಪುಟದಲ್ಲಿ ಚರ್ಚಿಸಿದ ಬಳಿಕ ಯಾವುದೇ ಸಮಾಜಕ್ಕೂ ಅನ್ಯಾಯವಾಗದ ರೀತಿಯಲ್ಲಿ ಜಾತಿಗಣತಿಯನ್ನು ಜಾರಿಗೊಳಿಸಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿದೆ. ಗಣತಿಯ ವರದಿಯ ಬಗ್ಗೆ ಯಾವುದೇ ಸಚಿವರೂ ವಿರೋಧ ವ್ಯಕ್ತಪಡಿಸಿಲ್ಲ ಎಂದು ಸ್ಪಷ್ಟಪಡಿಸಿದರು. ಯಾವುದೇ ಸಮಾಜಕ್ಕೆ ಹಾನಿಯಾಗದಂತೆ ಎಲ್ಲರಿಗೂ ನ್ಯಾಯ ಕೊಡಿಸಬೇಕೆಂಬುದು ನಮ್ಮೆಲ್ಲರ ಉದ್ದೇಶವಾಗಿದ್ದು, ಮುಂಬರುವ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><><>

ರಾಜ್ಯದ ಖಜಾನೆಯಲ್ಲಿ ಭದ್ರವಾಗಿರಿಸಿದ್ದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಗಣತಿ ವರದಿಯನ್ನು ತೆರೆದು ಅದರಲ್ಲಿ ಬದಲಾವಣೆಗಳನ್ನು ಮಾಡಲಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೨೦೨೧ರಲ್ಲಿ ಸೀಲ್ ಮಾಡಲಾಗಿದ್ದ ಲಕೋಟೆಯನ್ನು

ತೆರೆದಿರುವ ವಿಷಯವನ್ನು ಅಂದಿನ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಗಡೆ ಅವರು ಗಮನಿಸಿದ್ದು, ಈ ಸಂಬಂಧ ಸರ್ಕಾರಕ್ಕೆ ಪತ್ರವನ್ನೂ ಬರೆದಿದ್ದಾರೆ . ಕಾಂತರಾಜು ಸಮಿತಿಯು ಸಿದ್ಧಪಡಿಸಿದ್ದ ವರದಿಯನ್ನು ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಿವಾಸದಲ್ಲಿ ಇರಿಸಲಾಗಿತ್ತು ಎಂದು ಅವರು ಹೇಳಿದ್ದಾರೆ. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಗಣತಿಯ ಹೆಸರಿನಲ್ಲಿ ಸರ್ಕಾರ ೧೨೯ ಕೋಟಿ ರೂಪಾಯಿಗಳನ್ನು ದುರುಪಯೋಗಪಡಿಸಿಕೊಂಡಿದೆ. ಈ ಸಂಬಂಧ ಸರ್ಕಾರ, ಸಮೀಕ್ಷೆ ನಡೆಸಿದವರ ಸಂಪೂರ್ಣ ವಿವರಗಳನ್ನು ಬಹಿರಂಗಗೊಳಿಸಿ, ಸಮೀಕ್ಷೆಗೆ ಮಾಡಲಾದ ಖರ್ಚು, ವೆಚ್ಚಗಳನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

<><><>

ಮುಂಬೈನಲ್ಲಿ ಮೇ ಒಂದರಿಂದ ನಾಲ್ಕರವರೆಗೆ ಆಯೋಜಿಸಲಾಗಿರುವ ವಿಶ್ವ ಧ್ವನಿ- ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಜಾಗತಿಕ ಮಾಧ್ಯಮ ಮಾತುಕತೆಯ ಮುಂದಾಳತ್ವ ವಹಿಸಲಿದ್ದಾರೆ. ಭಾರತದಲ್ಲಿ ಸೃಷ್ಟಿಸಿ- ವಿಶ್ವಕ್ಕಾಗಿ ಸೃಷ್ಟಿಸಿ ದೃಷ್ಟಿಯೊಂದಿಗೆ ಭಾರತವನ್ನು ಜಾಗತಿಕ ಮಾಧ್ಯಮ ಮನರಂಜನಾ ಕೇಂದ್ರ ಸ್ಥಾಪನೆಗೆ ಪ್ರಧಾನಿ ಶಿಲಾನ್ಯಾಸ ನೆರವೇರಿಸಲಿದ್ದಾರೆ. ದೇಶಗಳ ನಡುವೆ ಧ್ವನಿ ಮತ್ತು ದೃಶ್ಯ ಮಾಧ್ಯಮದ ಸೃಜನಶೀಲರನ್ನು ಬೆಸೆಯುವುದಕ್ಕೆ ಮತ್ತು ಮಾಧ್ಯಮ ಹಾಗೂ ಮನರಂಜನಾ ವಲಯದಲ್ಲಿ ಅಂತಾರಾಷ್ಟ್ರೀಯ ಸಹಭಾಗಿತ್ವ ಹೆಚ್ಚಿಸಲು ವೇವ್ಸ್ ಶೃಂಗಸಭೆ ಉತ್ತಮ ವೇದಿಕೆಯಾಗಿದೆ. ಸೃಜನಶೀಲ ವೃತ್ತಿಪರರು, ನೀತಿ ನಿರೂಪಕರು, ಉದ್ಯಮದ ಪ್ರಮುಖರು, ತಂತ್ರಜ್ಞಾನ ಕಂಪನಿಗಳು, ನವೋದ್ಯಮಗಳು ಹಾಗೂ ಹೂಡಿಕೆದಾರರನ್ನು ಈ ಶೃಂಗಸಭೆ ಒಂದೇ ವೇದಿಕೆಗೆ ತರಲಿದೆ.

<><><>

ರಾಜ್ಯ ಸರ್ಕಾರ, ಚುನಾವಣೆ ಪೂರ್ವದಲ್ಲಿ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ನುಡಿದಂತೆ ನಡೆದಿದೆ ಎಂದು ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ತಿಳಿಸಿದ್ದಾರೆ. ಹೊನ್ನಾವರದಲ್ಲಿ ನಡೆದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಅವರು,, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರ ತಂದ, ಉತ್ತರ ಕನ್ನಡ ಜಿಲ್ಲೆಯಲ್ಲಿ ಪಂಚ ಗ್ಯಾರೆಂಟಿ ಯೋಜನೆಗಳ ಯಶಸ್ವಿ ಅನುಷ್ಠಾನದ ಕಿರು ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು. ಬಜೆಟ್‌ನಲ್ಲಿ ೫೨ ಸಾವಿರ ಕೋಟಿ ರೂಪಾಯಿ ಅನುದಾನವನ್ನು ಐದು ಗ್ಯಾರಂಟಿ ಯೋಜನೆಗಳಿಗೆ ಮೀಸಲಿಡಲಾಗಿದೆ ಎಂದು ಹೇಳಿದ್ದಾರೆ.

<><><>

ವಿಜಯಪುರ ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಪೆಟ್ರೋಲ್ ಪಂಪ್‌ಗಳು ಎಲ್ಲ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್

ಸೂಚನೆ ನೀಡಿದ್ದಾರೆ. ನಿಯಮದಂತೆ ಪೆಟ್ರೋಲ್ ಪಂಪ್‌ಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸುಸಜ್ಜಿತವಾದ ಶೌಚಾಲಯ, ಸ್ನಾನದ ಕೋಣೆ, ಪ್ರಥಮ ಚಿಕಿತ್ಸೆ ಪೆಟ್ಟಿಗೆ, ಅಗ್ನಿ ಶರ್ಮ ವಸ್ತುಗಳು, ವಾಹನಗಳಿಗೆ ಏರ್ ಮೆಷಿನ್ ಮತ್ತು ನೈಟ್ರೋಜನ್ ಸೇವೆ ಇರಬೇಕು. ವಾಹನಗಳಿಗೆ ಅಡೆತಡೆಯಾಗದಂತೆ ಒಳಗೆ-ಹೊರಗೆ ಹೋಗಲು ರಸ್ತೆ ಸಂಪರ್ಕ, ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಗ್ರಾಹಕರಿಗೆ ಸರಿಯಾಗಿ ಅಳತೆ ಮಾಡಿ ಪೆಟ್ರೋಲ್ ಒದಗಿಸುವ ನಿಯಮವನ್ನು ಕಡ್ಡಾಯವಾಗಿ ಪಾಲಿಸುವಂತೆ ನಿರ್ದೇಶನ ನೀಡಿದ್ದಾರೆ.

<><><>

ಚಿಕ್ಕಮಗಳೂರು ನಗರಸಭೆಯು ೧೮ ದಿನಗಳಲ್ಲಿ ಒಟ್ಟು ೨ ಕೋಟಿ ೩೬ ಲಕ್ಷ ರೂಪಾಯಿ ತೆರಿಗೆ ಸಂಗ್ರಹ ಮಾಡಿದೆ ಎಂದು ಪೌರಾಯುಕ್ತರಾದ ಬಿ.ಸಿ ಬಸವರಾಜ್ ತಿಳಿಸಿದ್ದಾರೆ. ನಗರಸಭೆಯು ೧೯ ಕೋಟಿ ೯೨ ಲಕ್ಷ ರೂಪಾಯಿ ತೆರಿಗೆ ಸಂಗ್ರಹದ ಗುರಿ ಹೊಂದಿದ್ದು, ಏಪ್ರಿಲ್ ೧ ರಿಂದ ೧೭ ರವರೆಗೆ ಒಟ್ಟು ೨ ಕೋಟಿ ೩೬ ಲಕ್ಷ ತೆರಿಗೆ ಸಂಗ್ರಹಿಸಲಾಗಿದೆ ಎಂದು ಹೇಳಿದರು. ನಗರ ಸಭೆ ವ್ಯಾಪ್ತಿಯಲ್ಲಿ ಖಾತೆ ಹೊಂದಿರುವ ಸುಮಾರು ೩೫ ಸಾವಿರ  ಸ್ವತುಗಳಿದ್ದು ಇದರಲ್ಲಿ ೨೨ ಸಾವಿರ ಮನೆಗಳು, ೪ ಸಾವಿರ ವಾಣಿಜ್ಯ ಕಟ್ಟಡಗಳು ಸೇರಿವೆ ಎಂದು ಮಾಹಿತಿ ನೀಡಿದ್ದಾರೆ.

<><><>

ರಾಜ್ಯದ ಹಲವೆಡೆ ಮಳೆಯಾಗಿದೆ. ತಿಪಟೂರು ೩, ಪುತ್ತೂರು ೨, ಮಣಿ, ಧರ್ಮಸ್ಥಳ, ಬೆಳ್ತಂಗಡಿ, ಕಡೂರು, ಬೇಲೂರು, ಹೆಸರಘಟ್ಟ, ಕಳಸದಲ್ಲಿ ತಲಾ ೧ ಸೆಂಟಿಮೀಟರ್ ಮಳೆಯಾಗಿದೆ. ರಾಜ್ಯದಲ್ಲಿ ಅತಿ ಹೆಚ್ಚು ಉಷ್ಣಾಂಶ ೪೧.೨ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಮುಂದಿನ ಐದು ದಿನಗಳಲ್ಲಿ ರಾಜ್ಯಾದ್ಯಂತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶನ ಡಾ.ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

**ಧ್ವನಿ: ಡಾ.ಸಿ.ಎಸ್. ಪಾಟೀಲ್ (೩೧ ಸೆಕೆಂಡ್‌ಗಳು)**

ಬೆಂಗಳೂರು ಸುತ್ತಮುತ್ತ ಸಾಮಾನ್ಯ ಮೋಡಕವಿದ ವಾತಾವರಣವಿದ್ದು, ಗುಡುಗು ಸಹಿತ ಮಳೆಯಾಗುವ ಸಾಧ್ಯತೆ. ಗರಿಷ್ಠ ೩೩ ಮತ್ತು ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಾಧ್ಯತೆ.

<><><>

ಜೈಪುರದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಟೂರ್ನಿಯ ಇಂದಿನ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಂಜಾಬ್ ಕಿಂಗ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೧೫೮ ರನ್‌ಗಳ ಗುರಿ ನೀಡಿದೆ. ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೫೭ ರನ್ ಗಳಿಸಲಷ್ಟೆ ಶಕ್ತವಾಯಿತು. ಆರ್‌ಸಿಬಿ ಪರ ಕೃಣಾಲ್ ಪಾಂಡ್ಯ ಹಾಗೂ ಸಯೀಶ್ ಶರ್ಮಾ ತಲಾ ೨ ವಿಕೆಟ್ ಗಳಿಸಿದರು. ೧೫೮ ರನ್ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ತಂಡದ ಆರಂಭಿಕ ಆಟಗಾರ ಫಿಲ್ ಸಾಟ್ ಕೇವಲ ೧ ರನ್ ಗಳಿಸಿ ಔಟಾದರೆ. ದೇವದತ್ ಪಡಿಕಲ್ ೬೧ ರನ್ ಗಳಿಸಿ, ಹರ್ಪ್ರೀತ್‌ಗೆ ವಿಕೆಟ್

ಒಪ್ಪಿಸಿದರು. ಇತ್ತೀಚಿನ ವರದಿ ಬಂದಾಗ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೧೮.೩ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೫೨ ರನ್ ಗಳಿಸಿ ಆಡುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>